# ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ

ಕಾರ್ಯಪಾಲಕ ಅಭಿಯಂತರರವರ ಕಛೇರಿ, ಗ್ರಾ.ಕು.ನೀ. & ನೈ. ವಿಭಾಗ,
ಪಂಚಾಯತ್ ಭವನ, 3ನೇ ಮಹಡಿ, ರಾಮನಗರ – 562 159,
ಇ-ಮೇಲ್ : eerdwsdrmgr2017@gmail.com

ಸಂಖ್ಯೆ : ಕಾ.ಅ./ಗ್ರಾ.ಕು.ನೀ. & ನೈ.ವಿ./ರಾಮ./ಕಿ.ಇ./ಡಿ.ಪಿ.ಎಂ./2025–26/266
ದಿನಾಂಕ : 21–05–2025

## ಪ್ರಕಟಣೆ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ರಾಮನಗರ ಜಿಲ್ಲೆಯ ರಾಮನಗರ ವಿಭಾಗ ಕಛೇರಿಯಲ್ಲಿ ಖಾಲಿ ಇರುವ ಜಿಲ್ಲಾ ಯೋಜನಾ ವ್ಯವಸ್ಥಾಪಕರು (District Project Manager - DPM) ಸಮಾಲೋಚಕರ ಹುದ್ದೆಗೆ ತಾತ್ಕಾಲಿಕವಾಗಿ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಯನ್ನು ನೇಮಿಸಿಕೊಳ್ಳಲು ಅರ್ಜಿ ಕರೆಯಲಾಗಿದೆ.

ಹುದ್ದೆಗಳ ವಿವರ, ವಿದ್ಯಾರ್ಹತೆ ಹಾಗೂ ಕಾರ್ಯಾನುಭವದ ವಿವರಗಳನ್ನು ಕೆಳಕಂಡಂತೆ ನೀಡಲಾಗಿದೆ.

1) ಹುದ್ದೆಯ ವಿವರ : ಜಿಲ್ಲಾ ಯೋಜನಾ ವ್ಯವಸ್ಥಾಪಕರು (ಡಿ.ಪಿ.ಎಂ.), ಹುದ್ದೆಗಳ ಸಂಖ್ಯೆ : 01, ವಿದ್ಯಾರ್ಹತೆ ಮತ್ತು ಅನುಭವ : 1) The Candidate is required to Possess Post Graduate Degree in Management / Social Science / Social Work / Relevant Profession Degree from a recognized University only. 2) 8 to 10 years of Relevant Experience in Project Management Leading a Team of Experts in Development Sectors preferably in Water, Sanitation and Rural Development Sector, ಮಾಸಿಕ ಸಮಾಲೋಚನಾ ಶುಲ್ಕ : ರೂ. 44,000/–.

1) ಹೊರಗುತ್ತಿಗೆ ಅವಧಿ : ಮೇಲಿನ ಹುದ್ದೆ ಸಂಪೂರ್ಣವಾಗಿ ತಾತ್ಕಾಲಿಕ ಹುದ್ದೆಯಾಗಿದ್ದು, ಒಂದು ವರ್ಷದ ಅವಧಿಗೆ ಹೊರಗುತ್ತಿಗೆಯ ಆಧಾರದ ಮೇಲೆ ನೇಮಿಸಿಕೊಳ್ಳಲಾಗುವುದು ನಂತರ ಕಾಲಕಾಲಕ್ಕೆ ಅವರ ಕಾರ್ಯಕ್ಷಮತೆಯನ್ನು ಪರಿಶೀಲಿಸಿ ಮತ್ತು ಅಗತ್ಯಕ್ಕೆ ಅನುಗುಣವಾಗಿ ನವೀಕರಿಸಲಾಗುವುದು. ಒಂದೊಮ್ಮೆ ಅಭ್ಯರ್ಥಿಯ ಕಾರ್ಯಕ್ಷಮತೆ ನಿರೀಕ್ಷಿತ ಮಟ್ಟದಲ್ಲಿ ಇಲ್ಲದಿದ್ದರೆ ಅಂತಹ ಅಭ್ಯರ್ಥಿಗಳ ಕರಾರು ಒಪ್ಪಂದವನ್ನು ಒಂದು ತಿಂಗಳ ನೋಟೀಸ್ ನೀಡಿ ರದ್ದುಪಡಿಸಲಾಗುವುದು. 2) ವಯೋಮಾನ : ಪ್ರಕಟಣೆ ಹೊರಡಿಸಿದ ದಿನಾಂಕಕ್ಕೆ 45 ವರ್ಷಗಳು ಮೀರಿರಬಾರದು. 3) ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿಯನ್ನು ತುಂಬಿ, ವಯಸ್ಸಿನ ದೃಢೀಕರಣ, ವಿದ್ಯಾರ್ಹತೆ, ಅನುಭವ, ಪ್ರಮುಖ ಸಾಮರ್ಥ್ಯಗಳು, (Resume) ಅರ್ಜಿಯನ್ನು ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ವಿಭಾಗ, 3ನೇ ಮಹಡಿ, ಪಂಚಾಯತ್ ಭವನ, ರಾಮನಗರ – 562 159 ಈ ವಿಳಾಸಕ್ಕೆ ಅರ್ಜಿಯ ಹಾರ್ಡ್ ಪ್ರತಿಯನ್ನು ದಿನಾಂಕ : 31–05–2025 ರ ಸಂಜೆ 5.30 ಗಂಟೆಯೊಳಗೆ ಸಲ್ಲಿಸಬೇಕು. ನಂತರ ಬಂದಂತಹ ಯಾವುದೇ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ. (ಅರ್ಜಿಯ ನಮೂನೆ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ವಿಭಾಗ, 3ನೇ ಮಹಡಿ, ಪಂಚಾಯತ್ ಭವನ, ರಾಮನಗರ – 562 159 ಕಛೇರಿಯಲ್ಲಿ ಲಭ್ಯವಿರುತ್ತದೆ). 4) ಸ್ನಾತಕ / ಸ್ನಾತಕೋತ್ತರ ಪದವಿಯನ್ನು ದೂರ ಶಿಕ್ಷಣ ಮುಖಾಂತರ ಪಡೆದಿದ್ದರೆ, ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ ಹಾಗೂ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. 5) ಕಿರುಪಟ್ಟಿ ಮಾಡಿದ ಅಭ್ಯರ್ಥಿಗಳಿಗೆ (Shortlisted Candidates) ಅವರುಗಳಿಗೆ ಮಾತ್ರ ದೂರವಾಣಿ ಮುಖಾಂತರ ತಿಳಿಸಲಾಗುವುದು. 6) ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನವನ್ನು ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ರಾಮನಗರ ವಿಭಾಗ ಕಛೇರಿಯಲ್ಲಿ ನೇರ ಸಂದರ್ಶನ ಅಥವಾ ವಿಡಿಯೋ ಸಂವಾದದ ಮೂಲಕ ನಡೆಸಲಿದ್ದು, ನಿಗದಿಪಡಿಸಿದ ದಿನಾಂಕ ಮತ್ತು ವೇಳೆಯಲ್ಲಿ ಹಾಜರಾಗುವುದು. 7) ಹೊರಗುತ್ತಿಗೆ ನೇಮಕಾತಿಯನ್ನು ಪೂರ್ಣವಾಗಿ ಮತ್ತು ಭಾಗಶಃ ರದ್ದು ಮಾಡುವ / ಮುಂದೂಡುವ / ಬದಲಾವಣೆ ಮಾಡುವ ಹಕ್ಕನ್ನು ಇಲಾಖೆಯು ಹೊಂದಿರುತ್ತದೆ.

ಸಹಿ/– ಕಾರ್ಯಪಾಲಕ ಅಭಿಯಂತರರು,
ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆ,
ರಾಮನಗರ ವಿಭಾಗ, ರಾಮನಗರ.

ಡಿಐಪಿಆರ್/ರಾಮನಗರ/101/ಮಣಿಪಾಲ್/2025–26